ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನಸಾಗರ ಆವರಣ, ವಿನಾಯಕ ನಗರ, ಬಳ್ಳಾರಿ–583105

VIJAYANAGARA SRI KRISHNADEVARAYA UNIVERSITY

"Jnana Sagar" Campus, Vinayaka Nagara, Ballari-583 105

ಕುಲಸಚಿವರು

ಸಂಖ್ಯೆ:ವಿ.ಶ್ರೀ.ಕೃ.ವಿ.ವಿ.ಬ/ಕಾ.ಅ.ಮಂ/ಸಂಯೋಜನೆ/ಅಧಿಸೂಚನೆ/2026–27/79 ದಿನಾಂಕ: 14.10.2026

ಅಧಿಸೂಚನೆ ಪ್ರಕಟಣೆ

ವಿಷಯ : 2027–2028ನೇ ಶೈಕ್ಷಣಿಕ ಸಾಲಿಗೆ UUCMS ತಂತ್ರಾಂಶದ ಮುಖಾಂತರ ಸಂಯೋಜನಾ ಅರ್ಜಿ ಆಹ್ವಾನಿಸುವ ಕುರಿತು.

ಉಲ್ಲೇಖ 1 ಸಂಖ್ಯೆ ಇಡಿ212ಯುಎನ್ಇ2024, ಬೆಂಗಳೂರು, ದಿನಾಂಕ:23–10–2025

2 ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 30.09.2026

*****

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವ್ಯಾಪ್ತಿಯ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ 2027–28ನೇ ಶೈಕ್ಷಣಿಕ ಸಾಲಿನಿಂದ ಕಲಾ, ವಿಜ್ಞಾನ, ವಾಣಿಜ್ಯ, ಶಿಕ್ಷಣ ಮತ್ತು ದೈಹಿಕ ಶಿಕ್ಷಣ ಹಾಗೂ ಇನ್ನಿತರ ಸಾಂಪ್ರದಾಯಿಕ ವಿಷಯಗಳಲ್ಲಿ ಹೊಸ ಪದವಿ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲು ಇಚ್ಛಿಸುವ ಸರ್ಕಾರದ ನಿಯಮಾವಳಿಯಂತೆ ನೋಂದಾಯಿಸಲ್ಪಟ್ಟ ಸಂಘ ಸಂಸ್ಥೆಗಳು/ ಸಾರ್ವಜನಿಕ ಟ್ರಸ್ಟ್‌ಗಳಿಂದ ಹೊಸ ಸಂಯೋಜನಾ ಅರ್ಜಿಗಳು ಹಾಗೂ ಪ್ರಸ್ತುತ ವಿಶ್ವವಿದ್ಯಾಲಯದಿಂದ ಸಂಯೋಜನೆ ಹೊಂದಿರುವ ಮಹಾವಿದ್ಯಾಲಯಗಳಿಂದ ಸ್ನಾತಕ/ ಸ್ನಾತಕೋತ್ತರ ಕೋರ್ಸ್‌ಗಳಿಗೆ ಮುಂದುವರಿಕೆ/ವಿಸ್ತರಣೆ/ ಹೊಸ ಕೋರ್ಸ್/ ಹೊಸ ವಿಷಯ/ ಪ್ರವೇಶ ಮಿತಿ ಹೆಚ್ಚಳ/ ಶಾಶ್ವತ ಸಂಯೋಜನೆ/ ಶಾಶ್ವತ ಸಂಯೋಜನೆ ನವೀಕರಣ/ ಮಹಾವಿದ್ಯಾಲಯಗಳ ಹೆಸರು ಬದಲಾವಣೆ/ಮಹಾವಿದ್ಯಾಲಯ ಸ್ಥಳಾಂತರ/ಆಡಳಿತ ಮಂಡಳಿ ಬದಲಾವಣೆ ಹಾಗೂ ಇತ್ಯಾದಿಗಳಿಗಾಗಿ ಸಂಬಂಧಿಸಿದ ದಾಖಲೆಗಳೊಂದಿಗೆ ನಿಗದಿತ ಸಂಯೋಜನಾ ಶುಲ್ಕವನ್ನು ಪಾವತಿಸಿ ಸರ್ಕಾರದ ಸಂಯೋಜನೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಸಂಯೋಜನ ಶುಲ್ಕಗಳ ವಿವರ ಹಾಗೂ ಸಂಯೋಜನೆಗೆ ಅರ್ಜಿಗಳನ್ನು ಸಲ್ಲಿಸಲು ಹಾಗೂ ಸಂಬಂಧಿಸಿದ ಇನ್ನಿತರ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣ ವಿಳಾಸ (**https://vskub.ac.in**) ದಲ್ಲಿ ನೋಡಬಹುದು. ಕರ್ನಾಟಕ ಸರ್ಕಾರ ಅಭಿವೃದ್ಧಿ ಪಡಿಸಿದ UUCMS ತಂತ್ರಾಂಶದ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.

ಮುಂದುವರೆದು, ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿ ಪಡೆದು ಶುಲ್ಕ ಭರಿಸಿದ್ದರ ಬಗ್ಗೆ ರಸೀದಿ ಮತ್ತು ಸಂಪೂರ್ಣ ದಾಖಲೆಗಳೆಲ್ಲವುಗಳನ್ನು ಬೈಂಡಿಂಗ್/ಸ್ಪೈರಲ್ ಬೈಂಡಿಂಗ್ ಮಾಡಿಸಿ ಎರಡು ಪ್ರತಿಗಳನ್ನು **ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ**, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಜ್ಞಾನಸಾಗರ ಆವರಣ, ಬಳ್ಳಾರಿ–583105 ಇವರಿಗೆ ದಿನಾಂಕ: **16–11–2026ರ** ಸಂಜೆ 05 ಗಂಟೆಯೊಳಗಾಗಿ (ದಂಡ ರಹಿತ) ಹಾಗೂ ದಿನಾಂಕ: **21–11–2026ರ** ಸಂಜೆ 05 ಗಂಟೆಯೊಳಗಾಗಿ ರೂ. 22,000/–ದಂಡ ಶುಲ್ಕದೊಂದಿಗೆ ಅರ್ಜಿಯನ್ನು ಸಲ್ಲಿಸಲು ಸೂಚಿಸಲಾಗಿದೆ.

ಆನ್‌ಲೈನ್ ಮೂಲಕ ಸಂಯೋಜನಾ ಅರ್ಜಿ ಸಲ್ಲಿಸುವುದಕ್ಕಾಗಿ ನಿಗದಿಪಡಿಸಲಾದ ದಿನಾಂಕಗಳು		
1.	ಸಂಯೋಜನಾ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ	27–10–2026
2.	ಸಂಯೋಜನಾ ಅರ್ಜಿ ಸಲ್ಲಿಸಲು ದಂಡ ರಹಿತ ಶುಲ್ಕದೊಂದಿಗೆ ಕೊನೆಯ ದಿನಾಂಕ	16–11–2026
3.	**ಸಂಯೋಜನಾ ಅರ್ಜಿ ಸಲ್ಲಿಸಲು ರೂ.22,000/–ಗಳ ದಂಡ ಶುಲ್ಕದೊಂದಿಗೆ ಕೊನೆಯ ದಿನಾಂಕ**	17–11–2026 ರಿಂದ 21–11–2026ರ ವರೆಗೆ

ದಿನಾಂಕ: 21–11–2026 ರ ನಂತರ ಬಂದ ಸಂಯೋಜನಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಯಾವುದೇ ಕಾರಣಕ್ಕೂ ಸಂಯೋಜನಾ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ.

Lokesha. U

ಕುಲಸಚಿವರು

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಬಳ್ಳಾರಿ

ಹೆಚ್ಚಿನ ಮಾಹಿತಿಗಾಗಿ ಕಾಲೇಜು ಅಭಿವೃದ್ಧಿ ಮಂಡಳಿಯ ದೂರವಾಣಿ ಸಂಖ್ಯೆ:9731702701/9449786481 ಕ್ಕೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ